**Bangalore**
**Regional News**
**09.07.2025 / 2.30 pm**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಹೃದಯಾಘಾತದ ಬಗ್ಗೆ ಅನಗತ್ಯ ಆತಂಕ ಪಡುವ ಅಗತ್ಯ ಇಲ್ಲ - ಸಚಿವ ಡಾ.ಶರಣ ಪ್ರಕಾಶ್ ಪಾಟೀಲ್

೨. ಕರಾವಳಿಯಲ್ಲಿ ಶಾಂತಿ ಸ್ಥಾಪಿಸಲು ಸರ್ಕಾರ ನಿರ್ಧಾರ - ವಿವಿಧ ಧಾರ್ಮಿಕ ಸಮುದಾಯಗಳೊಂದಿಗೆ ಗೃಹಸಚಿವ ಡಾ.ಜಿ.ಪರಮೇಶ್ವರ್ ಸಭೆ

೩. ಸಚಿವ ಸಂಪುಟ ವಿಸ್ತರಣೆ ತಳ್ಳಿಹಾಕಿದ ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್

೪. ರಾಜ್ಯಸರ್ಕಾರ ಭಯೋತ್ಪದನೆಯ ಬಗ್ಗೆ ಮೃದು ಧೋರಣೆ ; ಬಿಜೆಪಿ ಗಂಭೀರ ಆರೋಪ

><><><><><><><><

ಇತ್ತೀಚಿನ ದಿನಗಳಲ್ಲಿ ಯುವಕರು ಹೃದಯಾಘಾತಕ್ಕೆ ಒಳಗಾಗುತ್ತಿರುವುದರಿಂದ ಜನರಲ್ಲಿ ಹೃದಯದ ವಿಷಯದಲ್ಲಿ ಭಯದ ವಾತಾವರಣ ಮೂಡಿದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ. ಪತ್ರಕರ್ತರಿಗೆ ಹೃದಯ ಆರೋಗ್ಯ ತಪಾಸಣೆ ಶಿಬಿರ ಉದ್ಘಾಟಿಸಿ ಮಾತನಾಡಿದ ಅವರು, ಯಾರೂ ಅನಗತ್ಯ ಆತಂಕ ಪಡುವ ಅಗತ್ಯ ಇಲ್ಲ ಎಂದು ಹೇಳಿದ್ದಾರೆ. ಐ.ಸಿ.ಎಂ.ಆರ್. ಸೇರಿದಂತೆ ಅನೇಕ ಸಂಸ್ಥೆಗಳು ಅಧ್ಯಯನ ಕೈಗೊಂಡಿದ್ದು, ಎಲ್ಲಿಯೂ ಕೋವಿಡ್ ಲಸಿಕೆಯಿಂದ ಹೃದಯಾಘಾತದ ಬಗ್ಗೆ ಸಾಕ್ಷ್ಯ ಸಿಕ್ಕಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಯಾರಾದರೂ ಹೃದಯಾಘಾತದಿಂದ ಮೃತಪಟ್ಟಲ್ಲಿ ಮರಣೋತ್ತರ ಪರೀಕ್ಷೆ ನಡೆಸಲಾಗುವುದು. ಇದರಿಂದ ಸಾವಿಗೆ ನಿಖರ ಕಾರಣ ತಿಳಿದು ಬರಲಿದೆ ಎಂದು ಹೇಳಿದ್ದಾರೆ. ಹಾಸನದಲ್ಲಿ ಹೃದಯಾಘಾತದ ಪ್ರಕರಣ ಹೆಚ್ಚಾಗಿ ಕಂಡುಬಂದ ಹಿನ್ನೆಲೆಯಲ್ಲಿ ತಜ್ಞರ ಸಮಿತಿ ರಚಿಸಿದ್ದು, ವರದಿ ಬಂದ ನಂತರ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

><><><><><><><><

ಕರಾವಳಿ ಪ್ರದೇಶದಲ್ಲಿ ಸೇಡಿನ ಹತ್ಯೆಗಳು ಮತ್ತು ಇರಿತ ಪ್ರಕರಣಗಳು ಸೇರಿದಂತೆ ಹೆಚ್ಚುತ್ತಿರುವ ಕೋಮುಗಲಭೆಗೆ ಕಡಿವಾಣ ಹಾಕಲು ಗೃಹಸಚಿವ ಡಾ.ಜಿ.ಪರಮೇಶ್ವರ್ ಅಧ್ಯಕ್ಷತೆಯಲ್ಲಿ ಇಂದು ವಿವಿಧ ಧಾರ್ಮಿಕ ಸಮುದಾಯಗಳ ನಾಯಕರೊಂದಿಗೆ ಶಾಂತಿಸಭೆ ನಡೆಸಿದ್ದಾರೆ.ಸಭೆಯಲ್ಲಿ, ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್, ರಾಜಕೀಯ ಮುಖಂಡರು ಸಮುದಾಯ ಪ್ರತಿನಿಧಿಗಳು ಮತ್ತು ವಿವಿಧ ಸಂಘಟನೆಗಳ ಮುಖಂಡರು ಭಾಗವಹಿಸಿದ್ದರು. ಬಳಿಕ ಮಾತನಾಡಿದ ಗೃಹಸಚಿವ ಡಾ.ಜಿ.ಪರಮೇಶ್ವರ್, ಕರಾವಳಿಯಲ್ಲಿ ಶಾಂತಿ ಕಾಪಾಡುವ ಅವಶ್ಯಕತೆ ಇದೆ. ಈ ಪ್ರದೇಶವು ಅಭಿವೃದ್ಧಿ ಮತ್ತು ಬೆಳವಣಿಗೆಗೆ ಪೂರಕವಾಗಿರುವ ಹಿನ್ನೆಲೆಯಲ್ಲಿ ಸರ್ಕಾರ ಕರಾವಳಿ ಅಭಿವೃದ್ಧಿಗೆ ಒತ್ತು ನೀಡುತ್ತಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ ರಾಜ್ಯಾದ್ಯಂತ ಖಾಲಿ ಇರುವ ೪೦೨ ಪೊಲೀಸ್ ಸಬ್-ಇನ್ಸ್‌ಪೆಕ್ಟರ್ ಹುದ್ದೆ ಹಾಗೂ ಹತ್ತರಿಂದ ಹದಿನೈದು ಸಾವಿರ ಹುದ್ದೆಗಳನ್ನು ಶೀಘ್ರದಲ್ಲೇ ಭರ್ತಿ ಮಾಡಲಾಗುವುದು ಎಂದು ಗೃಹ ಸಚಿವರು ಘೋಷಿಸಿದ್ದಾರೆ.

><><><><><><><><

ಸಂಪುಟ ವಿಸ್ತರಣೆ ವಿಚಾರವಾಗಿ ಚರ್ಚಿಸಲು ತಾವು ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ನವದೆಹಲಿಗೆ ಬಂದಿಲ್ಲ ಎಂದು ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂಪುಟ ವಿಸ್ತರಣೆ ವಿಚಾರವನ್ನು ತಳ್ಳಿ ಹಾಕಿದ್ದಾರೆ. ಇದೇ ವೇಳೆ ಬೆಂಗಳೂರಿನಲ್ಲಿ ಟನೆಲ್ ರಸ್ತೆಗಾಗಿ ಜಾಗತಿಕ ಟೆಂಡರ್ ಕರೆಯಲಾಗಿದ್ದು ಕಾಮಗಾರಿ ಆದಷ್ಟು ಬೇಗ ಆರಂಭವಾಗಲಿದೆ ಎಂದು ತಿಳಿಸಿದ್ದಾರೆ. ಟನೆಲ್ ರಸ್ತೆಯಲ್ಲಿ ಟೋಲ್ ಪ್ಲಾಜಾಗಳನ್ನು ನಿರ್ಮಿಸುವುದು ಅನಿವಾರ್ಯವೆಂದು ಹೇಳಿದ್ದಾರೆ. ಎಲ್ಲಾ ಕಡೆ ರಸ್ತೆಗಳಲ್ಲಿ ಟೋಲ್‌ಗಳಿರುವಾಗ ಬೆಂಗಳೂರು ಟನೆಲ್ ರಸ್ತೆಗೆ ಯಾಕೆ ಬೇಡ ಎಂದು ಪ್ರಶ್ನಿಸಿದ್ದಾರೆ.

><><><><><><><><

ಮುಖ್ಯಮಂತ್ರಿ ಸಿದ್ದರಾಮಯ್ಯ ನವದೆಹಲಿ ಪ್ರವಾಸ ಕೈಗೊಂಡಿದ್ದು, ಇಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರನ್ನು ಭೇಟಿ ಮಾಡಲಿದ್ದಾರೆ. ಈ ಸಂದರ್ಭದಲ್ಲಿ ಅವರು ಮೈಸೂರು ದಸರಾ ಮಹೋತ್ಸವದಲ್ಲಿ ವೈಮಾನಿಕ ಪ್ರದರ್ಶನ ಹಾಗೂ ಹಲವು ವಿಷಯಗಳ ಕುರಿತು ಚರ್ಚೆ ನಡೆಸಲಿದ್ದಾರೆ.  ಬಳಿಕ ಅವರು ಪಕ್ಷದ ನಾಯಕ ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡಿ ರಾಜ್ಯ ರಾಜಕೀಯದ ಬಗ್ಗ ಚರ್ಚೆ ನಡೆಸಲಿದ್ದಾರೆ.

><><><><><><><><

ರಾಜ್ಯಸರ್ಕಾರ ಭಯೋತ್ಪಾದನೆಯ ಬಗ್ಗೆ ಮೃದುಧೋರಣೆ ಹೊಂದಿದೆ ಎಂದು ಬಿಜೆಪಿ ಆರೋಪಿಸಿದೆ. ಬೆಂಗಳೂರಿನಲ್ಲಿ ಪ್ರತಿಕ್ರಿಯಿಸಿದ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಶಾಸಕ ವಿ. ಸುನೀಲ್ ಕುಮಾರ್ ಬೆಂಗಳೂರು ಮತ್ತು ಕೋಲಾರದಲ್ಲಿ ರಾಷ್ಟ್ರೀಯ ತನಿಖಾ ಸಂಸ್ಥೆ ಮೂವರು ವ್ಯಕ್ತಿಗಳನ್ನು ಬಂಧಿಸಿದ್ದು, ಇದಕ್ಕೆ ರಾಜ್ಯದಲ್ಲಿ ಕುಸಿದ ಕಾನೂನು ವ್ಯವಸ್ಥೆ ಕಾರಣ ಎಂದು ಆರೋಪಿಸಿದ್ದಾರೆ. ಇದೇ ವೇಳೆ ಕರ್ನಾಟಕ ನಿಗ್ರಹ ದಳದ ಪಾತ್ರವನ್ನು ಅವರು ಪ್ರಶ್ನಿಸಿದ್ದಾರೆ. ಉಗ್ರ ಕೃತ್ಯಕ್ಕೆ ನೆರವು ಆರೋಪದ ಮೇಲೆ ಪರಪ್ಪನ ಅಗ್ರಹಾರ ಜೈಲಿನ ಮನೋವೈದ್ಯ ಡಾ.ನಾಗರಾಜ್ ಸಹಾಯಕ ಸಬ್ ಇನ್ಸ್ ಪೆಕ್ಟರ್ ಚಾನ್‌ಪಾಷಾ ಹಾಗೂ ಕೋಲಾರದ ಅನೀಸಾ ಫಾತೀಮ ಎಂಬುವವರನ್ನು ನಿನ್ನೆ ಎನ್‌ಐಎ ಅಧಿಕಾರಿಗಳು ಬಂಧಿಸಿದ್ದರು.

><><><><><><><><

ಭಾರತದಲ್ಲಿ ನಡೆದ ಭಯೋತ್ಪಾದಕ ದಾಳಿಗಳಲ್ಲಿ ಭಯೋತ್ಪಾದಕರು ದಾಳಿಗೆ ಅಗತ್ಯವಿದ್ದ ವಸ್ತುಗಳನ್ನು ಖರೀದಿಸಲು ಆನ್‌ಲೈನ್ ವಾಣಿಜ್ಯ ವೇದಿಕೆಗಳನ್ನು ಬಳಸಿದ್ದಾಗಿ ಜಾಗತಿಕ ಭಯೋತ್ಪಾದನಾ ಹಣಕಾಸು ನಿಗಾ ಸಂಸ್ಥೆ- ಹಣಕಾಸು ಕ್ರಿಯಾ ಕಾರ್ಯಪಡೆ- ಎಫ್.ಎ.ಟಿ.ಎಫ್ ವರದಿ ತಿಳಿಸಿದೆ. ಜಮ್ಮು-ಕಾಶ್ಮೀರದ ಪುಲ್ವಾಮ ದಾಳಿ ಮತ್ತು ಉತ್ತರಪ್ರದೇಶದ ಗೋರಖ್‌ನಾಥ್ ದೇವಾಲಯದ ಬಳಿಯ ಭಯೋತ್ಪಾದಕ ದಾಳಿ ಪ್ರಕರಣಗಳಲ್ಲಿ ಈ ಕುರಿತು ಪುರಾವೆಗಳು ಸಿಕ್ಕಿವೆ ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ. ಭಯೋತ್ಪಾದಕ ಕೃತ್ಯಗಳಿಗೆ ಹಣಕಾಸು, ಸರಕು ಮತ್ತು ತರಬೇತಿ ಸೇರಿದಂತೆ ಇತರ ನೆರುವು ಪಡೆಯಲು, ಸಾಮಾಜಿಕ ಜಾಲತಾಣಗಳು, ಮೆಸೆಜಿಂಗ್ ಆಪ್‌ಗಳು ಮತ್ತು ಕ್ರೌಡ್ ಫಂಡಿಂಗ್ ವೇದಿಕೆಗಳನ್ನು ಹೆಚ್ಚಾಗಿ ದುರುಪಯೋಗಪಡಿಸಿಕೊಳ್ಳುತ್ತಿವೆ ಎಂದು ತಿಳಿಸಲಾಗಿದೆ.

><><><><><><><><

ಚಿಕ್ಕಮಗಳೂರು  ಜಿಲ್ಲೆಯ ಕೊಪ್ಪ ತಾಲೂಕಿನ ಹರಂದೂರು ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ನಡೆದ ವಿಧ್ಯಾರ್ಥಿನಿಯರ ಆತ್ಮಹತ್ಯೆ ಪ್ರಕರಣದ  ತನಿಖೆ ನಡೆಸಲು ನಿವೃತ ಜಿಲ್ಲಾ ನ್ಯಾಯಾದೀಶರನ್ನು ನೇಮಿಸಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಆದೇಶ ಹೊರಡಿಸಿದೆ. ೨೦೨೩ ರಲ್ಲಿ ಅಮೂಲ್ಯ ಎಂಬ ೯ ನೇ ತರಗತಿ ವಿಧ್ಯಾರ್ಥಿನಿ ಹಾಗು ಈ ವರ್ಷದ ಜೂನ್ ತಿಂಗಳಿನಲ್ಲಿ ಶಮಿತ ಎಂಬ ೯ ನೇ ತರಗತಿ ವಿಧ್ಯಾರ್ಥಿನಿ ಆತ್ಮಹತ್ಯೆಗೆ ಶರಣಾಗಿದ್ಧರು.  ಈ ಪ್ರಕರಣಗಳ ತನಿಖೆಗೆ

ನಿವೃತ ಜಿಲ್ಲಾ ಸತ್ರ ನ್ಯಾಯಾದೀಶರಾದ ಶೋಭಾ ಅವರನ್ನು ತನಿಖಾಧಿಕಾರಿಯಾಗಿ ಹಾಗೂ  ಜಿಲ್ಲಾ ಸಮನ್ವಯ ಅಧಿಕಾರಿ ಶೈಲಾ ಅವರನ್ನು ನೋಡೆಲ್ ಅಧಿಕಾರಿಗಳಾನಾಗಿ ನೇಮಕ ಮಾಡಲಾಗಿದೆ.

><><><><><><><><

ಯಾದಗಿರಿ ಜಿಲ್ಲೆಯ ಹುಣಸಗಿ ತಾಲ್ಲೂಕಿನ ನಾರಾಯಣಪುರ ಗ್ರಾಮದ ಬಸವಸಾಗರ ಜಲಾಶಯ ಭರ್ತಿಯಾಗಿದ್ದು, ಕೃಷ್ಣಾ ಮೇಲ್ದಂಡೆ ಯೋಜನೆಯ ಎಲ್ಲ ಕಾಲುವೆಗಳಿಗೆ ಮಂಗಳವಾರದಿಂದ ನೀರು ಹರಿಸಲಾಗುತ್ತಿದೆ.  ಹಿಂದೆ ಅನುಸರಿಸಿದ ೧೪ ದಿನ ಚಾಲು ಹಾಗೂ ೧೦ ದಿನ ಬಂದ್ ಪದ್ಧತಿ ಅನುಸರಿಸಲು ಭೀಮರಾಯನಗುಡಿ ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಅಧೀಕ್ಷಕ ಎಂಜಿನಿಯರ್ ತಿಪ್ಪಣ್ಣಗೌಡ ಎಸ್ ಅನ್ನದಾನಿ ತಿಳಿಸಿದ್ದಾರೆ. ಇದೇ ೮ ರಿಂದ ೨೧ ರವರೆಗೆ, ಆಗಸ್ಟ್ ೧ ರಿಂದ ಆಗಸ್ಟ್ ೧೪ರವರೆಗೆ, ಆಗಸ್ಟ್ ೨೫ರಿಂದ ಸೆಪ್ಟೆಂಬರ್ ೭ರವರೆಗೆ, ಸೆಪ್ಟೆಂಬರ್ ೧೮ ರಿಂದ ಅಕ್ಟೋಬರ್ ೧ರವರೆಗೆ, ಅಕ್ಟೋಬರ್ ೧೨ರಿಂದ ಅಕ್ಟೋಬರ್ ೨೫ರವರೆಗೆ ಒಟ್ಟು ೭೦ ದಿನಗಳು ಕಾಲುವೆ ಚಾಲೂ ಇರಲಿದೆ ಎಂದು ಅನ್ನದಾನಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

><><><><><><><><

ಕೋಲಾರ ಜಿಲ್ಲೆಯ ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿ ಗ್ರಾಮ ಪಂಚಾಯತಿ ಸೇರಿದಂತೆ ಯಾವುದೇ ಭಾಗದಲ್ಲಿ ಸಾರ್ವಜನಿಕರು ಕಸವನ್ನು ಎಲ್ಲೆಂದರಲ್ಲಿ ಎಸೆಯಬಾರದು ಎಂದು  ಜಿಲ್ಲಾಧಿಕಾರಿ ಎಂ.ಆರ್.ರವಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ  ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಕಸ ಎಸೆದರೆ  ಸಿಸಿ ಕ್ಯಾಮರಾ ಮೂಲಕ  ಪರಿಶೀಲಿಸಿ ಕ್ರಿಮಿನಲ್ ಪ್ರಕರಣ ದಾಖಲಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಸಾರ್ವಜನಿಕರು ತಮ್ಮ ಮನೆಯ ಕಸವನ್ನು ಹಸಿಕಸ ಮತ್ತು ಒಣ ಕಸವನ್ನಾಗಿ ಬೇರ್ಪಡಿಸಿ ಕಸದ ವಾಹನಕ್ಕೆ ಹಾಕುವುದರಿಂದ ನಮ್ಮೆಲ್ಲರ ಆರೋಗ್ಯ ಹಾಗೂ ನಗರದ ಆರೋಗ್ಯ  ಕಾಪಾಡಲು ಸಾಧ್ಯ ಎಂದು ಅಭಿಪ್ರಾಯ ಪಟ್ಟಿದ್ದಾರೆ.

><><><><><><><><

ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ಕೆಂಭಾವಿ ಪಟ್ಟಣ ವ್ಯಾಪ್ತಿಯ ತಿಪ್ಪನಟಗಿಯಲ್ಲಿ ಸಂಭವಿಸಿದ ವಾಂತಿಭೇದಿ ಪ್ರಕರಣಕ್ಕೆ ಸಂಬಂಧಿಸಿದಂತೆ ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಲವೀಶ್ ಒರಡಿಯಾ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮೃತಪಟ್ಟ ವ್ಯಕ್ತಿಗಳ ಕುಟುಂಬದ ಮನೆಗಳಿಗೆ ಭೇಟಿ ನೀಡಿ ಮಾಹಿತಿ ಪಡೆದರು. ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ಸ್ಥಾಪಿಸಲಾಗಿರುವ ತಾತ್ಕಾಲಿಕ ಆಸ್ಪತ್ರೆಗೆ ತೆರಳಿ ಅಲ್ಲಿನ ಔಷಧಗಳ ಬಗ್ಗೆ ಪರಿಶೀಲನೆ ನಡೆಸಿದರು.

ಕುಡಿಯುವ ನೀರಿನ ಪೈಪ್ ಲೈನ್, ನೀರಿನ ತೊಟ್ಟಿ, ಒಳಚರಂಡಿ ವ್ಯವಸ್ಥೆ, ನೈರ್ಮಲ್ಯ ಸೇರಿದಂತೆ ಹಲವು ಸ್ಥಳಗಳಿಗೆ ಭೇಟಿ ನೀಡಿ ಗ್ರಾಮದಲ್ಲಿ ಸ್ವಚ್ಛತೆ ಕಾಪಾಡುವಂತೆ ಗ್ರಾಮ ಪಂಚಾಯಿತಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

><><><><><><><><

<u>ಸಂಕ್ಷಿಪ್ತ ಸುದ್ದಿಗಳು</u>

೧. ಮಂಡ್ಯ ಜಿಲ್ಲೆಯ ಮದ್ದೂರು ತಾಲ್ಲೂಕಿನಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆಯನ್ನು ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಜುಲೈ ೨೮ ರಂದು ನೆರವೇರಿಸಲಿದ್ದು, ಅಧಿಕಾರಿಗಳು ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಶಾಸಕ ಕೆ.ಎಂ.ಉದಯ್ ತಿಳಿಸಿದ್ದಾರೆ.

೨. ಮೀನುಗಾರಿಕೆ ಇಲಾಖೆ ಗದಗ ವತಿಯಿಂದ ೨೦೨೫-೨೬ನೇ ಸಾಲಿನ ಜಿಲ್ಲಾ ವಲಯದ ಮೀನು ಮಾರುಕಟ್ಟೆಗಳ ನಿರ್ಮಾಣ ಹಾಗೂ ಮೀನು ಮಾರಾಟಕ್ಕಾಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದ ಮೀನುಗಾರರಿಗೆ ಉಚಿತವಾಗಿ ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ ಹಾಗೂ ಮೀನುಕೃಷಿಗೆ ಸಹಾಯಧನ ನೀಡಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

><><><><><><><><